KARNATAKA SUCCESS NO 1
Kannada Daily
ಸಂಪಾದಕರು/ಮಾಲೀಕರು
ರಾಧಿಕಾ ಎ.ಆರ್.
Volume: 02 Issue-175
ಶನಿವಾರ 17 ಮೇ 2025
Price: 2.00 Rs. Pages - 2
RNI: KARKAN/2023/88508

# ಕರ್ನಾಟಕ ಸಕ್ಸಸ್ ನಂ 1

ಕನ್ನಡ ದಿನಪತ್ರಿಕೆ

ನಮ್ಮ ಸಂಪರ್ಕ: ಇ-ಮೇಲ್: karnatakasuccessno1ar@gmail.com ಮೊಬೈಲ್: 9380988530, 9606988508



ಕರ್ನಾಟಕ ಸಂಸ್ಕೃತಿ ರಕ್ಷಣಾ ವೇದಿಕೆಯ ತುಮಕೂರು ಜಿಲ್ಲಾ ಅಧ್ಯಕ್ಷರಾಗಿ ಬಸವರಾಜು ಟಿ ನೇಮಕವಾಗಿದ್ದಾರೆ. ವೇದಿಕೆಯ ರಾಜ್ಯಾಧ್ಯಕ್ಷ ಹೊಸಕೋಟೆ ನಟರಾಜು ನೇಮಕಾತಿ ಪತ್ರ ವಿತರಿಸಿದರು. ಈ ವೇಳೆ ಮಹಿಳಾ ಘಟಕ ಜಿಲ್ಲಾಧ್ಯಕ್ಷೆ ಸುಧಾ, ಪದಾಧಿಕಾರಿಗಳಾದ ಯಶವಂತ್, ಅರ್ಜುನ್, ಕುಶಾಲ್, ನಂದೀಶ್, ಎಲ್ಲಮ್ಮ ಹಾಜರಿದ್ದರು.

### ನಗರಪಾಲಿಕೆ ಅಧಿಕಾರಿಗಳಿಗೆ ಶಾಸಕ ಜ್ಯೋತಿಗಣೇಶ್ ಸೂಚನೆ

## 'ಇ-ಆಸ್ತಿ ಮಾಡಲು ಸಾರ್ವಜನಿಕರಿಗೆ ತೊಂದರೆ ಕೊಡಬೇಡಿ'

ತುಮಕೂರು: ಸ್ವತ್ತುಗಳನ್ನು ನೋಂದಣಿ ಮಾಡಲು ಸರ್ಕಾರಿ ಇ-ಆಸ್ತಿ ಖಾತೆಗಳನ್ನು ಕಡ್ಡಾಯ ಮಾಡಿದ ನಂತರ ತುಮಕೂರು ಮಹಾನಗರಪಾಲಿಕೆಯ ಇಡೀ ವಾತಾವರಣವೇ ಕೆಟ್ಟುಹೋಗಿದ್ದು, ಸಾರ್ವಜನಿಕರು ಇ-ಆಸ್ತಿ ಖಾತೆ ಮಾಡಿಸಲು ಪರದಾಡುವಂತಾಗಿದೆ.

ಅರ್ಜಿ ಸಲ್ಲಿಸಿ ತಿಂಗಳುಗಟ್ಟಲೆ ಕಳೆದರೂ ಅರ್ಜಿ ಸ್ಥಿತಿ ಏನೆಂದು ತಿಳಿದುಕೊಳ್ಳಲು ಸಾರ್ವಜನಿಕರು ಪರದಾಡುವಂತಾಗಿದೆ. ಯಾವುದೋ ಒಂದು ದಾಖಲೆಯಿಲ್ಲ ಎಂದು ತಿಂಗಳುಗಟ್ಟಲೆ ಸಾರ್ವಜನಿಕರನ್ನ ಅಲೆದಾಡಿಸಿ, ತದನಂತರ ರಿಜೆಕ್ಟ್ ಮಾಡಿದ ಸಾಕಷ್ಟು ದೂರುಗಳು ನನ್ನ ಹತ್ತಿರ ಬಂದಿದೆ. ಆತ್ಮ ಸಾಕ್ಷಿಗೆ ಒಪ್ಪುವಂತೆ ಅಧಿಕಾರಿಗಳು ಕೆಲಸ ನಿರ್ವಹಿಸಬೇಕಾಗಿದೆ ಎಂದು ಶಾಸಕ



ಜಿ.ಬಿ.ಜ್ಯೋತಿಗಣೇಶ್ ರವರು ತಿಳಿಸಿದರು.

ಅವರು ತುಮಕೂರು ನಗರದ ಶಾಸಕರ ಕಾರ್ಯಾಲಯದಲ್ಲಿ ತುಮಕೂರು ಮಹಾನಗರಪಾಲಿಕೆಯ ಕಂದಾಯ ಶಾಖೆಯ ಅಧಿಕಾರಿಗಳ ಸಭೆ ನಡೆಸಿ, ಅಧಿಕಾರಿಗಳ ಕಾರ್ಯ ವೈಖರಿ ಬಗ್ಗೆ ಅಸಮಧಾನ ವ್ಯಕ್ತಪಡಿಸಿದರು. ಇ-ಆಸ್ತಿ ಖಾತೆ ಮಾಡಲು 3 ಜನ ಪ್ರಾದೇಶಿಕ ಆಯುಕ್ತರಿಗೆ ಅಧಿಕಾರ ಏಕೇಂದ್ರಿಕರಣ ಮಾಡಿದ್ದು, ಪ್ರಸ್ತುತ ಅರ್ಜಿ ಸಲ್ಲಿಸಲು ಹಾಗೂ ನಮೂನೆ-2 ಪಡೆಯಲು ಹೆಚ್ಚುವರಿ ಕೌಂಟರ್ ತೆರೆಯಬೇಕೆಂದು ಹಾಗೂ ಎಂ.ಎ.ಆರ್-19 ಪ್ರತಿಯನ್ನು ರೆಕಾರ್ಡ್ ರೂಂ ಶಾಖೆಯಿಂದ ಪಡೆಯುವುದನ್ನು ದಿನಗಟ್ಟಲೆ ಕಾಯುವುದನ್ನ ತಪ್ಪಿಸಿ, ಎಂ.ಎ.ಆರ್-19 ಪ್ರತಿಯನ್ನು ಪಡೆಯುವುದನ್ನು ಸರಳೀಕರಣಗೊಳಿಸ ಬೇಕೆಂದು ಕಂದಾಯ ಆಯುಕ್ತರಿಗೆ ಶಾಸಕರು ಸೂಚನೆ ನೀಡಿದರು.

ಇ-ಆಸ್ತಿ ಹಾಗೂ ಬಿ-ಖಾತೆಯನ್ನು ಮಾಡಲು ತುಮಕೂರು ಮಹಾನಗರ ಪಾಲಿಕೆಯಲ್ಲಿ ಪ್ರಾರಂಭ ಮಾಡಿ ಹಲವಾರು ತಿಂಗಳು ಕಳೆದಿದ್ದರೂ ಸಹ ಶೇ.25% ಗುರಿ ತಲುಪಿಸಲು ಸಾಧ್ಯವಾಗಿಲ್ಲ.

(2ನೇ ಪುಟಕ್ಕೆ)

## ದೇವರಾಜ ಅರಸು ಮನೆ, ಸಮಾಧಿ ಅಭಿವೃದ್ಧಿಗಾಗಿ ಕೆಎನ್‌ಆರ್‌ಗೆ ಮನವಿ



ತುಮಕೂರು: ಮಾಜಿ ಮುಖ್ಯಮಂತ್ರಿ ದಿ.ದೇವರಾಜ ಅರಸು ಅವರು ಹುಟ್ಟೂರು ಮೈಸೂರು ಜಿಲ್ಲೆ ಕಲ್ಲಹಳ್ಳಿಯ ಅವರ ಮನೆ ಹಾಗೂ ಸಮಾಧಿಯನ್ನು ಸರ್ಕಾರ ಅಭಿವೃದ್ಧಿ ಮಾಡಿ ಸ್ಮಾರಕವಾಗಿ ರೂಪಿಸುವಂತೆ ಜಿಲ್ಲಾ ಹಿಂದುಳಿದ ವರ್ಗಗಳ ಒಕ್ಕೂಟದ ಮುಖಂಡರು ಶುಕ್ರವಾರ ಸಹಕಾರ ಸಚಿವ ಕೆ.ಎನ್.ರಾಜಣ್ಣನವರಿಗೆ ಮನವಿ ಮಾಡಿದರು.

ದೇವರಾಜ ಅರಸು ಅವರು ಮುಖ್ಯಮಂತ್ರಿಯಾಗಿದ್ದಾಗ ಹಲವಾರು ಜನಪರ ಕಾರ್ಯಕ್ರಮಗಳನ್ನು ಜಾರಿಗೆ ತಂದರು. ಹಿಂದುಳಿದವರ ಧ್ವನಿಯಾಗಿ, ಶೋಷಿತ ವರ್ಗಗಳ ಆಶಾಕಿರಣವಾಗಿದ್ದ ಅರಸು ಅವರ ಕೊಡುಗೆಯನ್ನು ನಾಡಿನ ಎಲ್ಲರೂ ಸದಾ ಸ್ಮರಿಸಬೇಕು. ಮೈಸೂರು ಜಿಲ್ಲೆಯ ಕಲ್ಲಹಳ್ಳಿಯಲ್ಲಿನ ಅರಸು ಅವರು ಹುಟ್ಟಿದ ಮನೆ ಶಿಥಿಲವಾಗಿದೆ, ಸಮಾಧಿ ಪಾಳುಬಿದ್ದಿದೆ. ಶ್ರೇಷ್ಠ ನಾಯಕನ ಗೌರವಾರ್ಥ ಈ ಎರಡೂ ಸ್ಥಳಗಳನ್ನು ರಕ್ಷಣೆ ಮಾಡಿ ಸ್ಮಾರಕಗಳನ್ನಾಗಿ ಅಭಿವೃದ್ಧಿ ಪಡಿಸಬೇಕು ಎಂದು ಒಕ್ಕೂಟದ ಗೌರವಾಧ್ಯಕ್ಷ ಟಿ.ಎನ್.ಮಧುಕರ್, ಅಧ್ಯಕ್ಷ ಧನಿಯಾಕುಮಾರ್ ಹಾಗೂ ಪದಾಧಿಕಾರಿಗಳು ಸಚಿವ ಕೆ.ಎನ್.ರಾಜಣ್ಣನವರಿಗೆ ಮನವಿ ಸಲ್ಲಿಸಿದರು.

ಇದರ ಜೊತೆಗೆ ನಗರದ ದೇವರಾಜ ಅರಸು ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಅರಸು ಅವರ ಪುತ್ಥಳಿ ಸ್ಥಾಪನೆ ಮಾಡಬೇಕು ಎಂದು ಕೋರಿದರು.

ಈ ತಿಂಗಳ 19ರಂದು ಮೈಸೂರು ಜಿಲ್ಲೆ ಪ್ರವಾಸ ಹೋಗುವ ಸಂದರ್ಭದಲ್ಲಿ ದೇವರಾಜ ಅರಸು ಅವರ ಮನೆ ಹಾಗೂ ಸಮಾಧಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ಅಭಿವೃದ್ಧಿಗೆ ಕ್ರಮ ತೆಗೆದುಕೊಳ್ಳುವುದಾಗಿ ಸಚಿವ ಕೆ.ಎನ್.ರಾಜಣ್ಣ ಹೇಳಿದರು.

ಒಕ್ಕೂಟದ ಮುಖಂಡರಾದ ಪಿ.ಮೂರ್ತಿ, ಮಲ್ಲಸಂದ್ರ ಶಿವಣ್ಣ, ಡಿ.ಎಂ.ಸತೀಶ್, ಲಕ್ಷ್ಮೀಕಾಂತರಾಜೇ ಅರಸು, ಹರೀಶ್ ಆಚಾರ್ಯ, ಮಂಜೇಶ್ ಒಲಂಪಿಕ್, ಶಾಂತಕುಮಾರ್, ಗುರುರಾಘವೇಂದ್ರ, ಡಮರುಗೇಶ್ ಮೊದಲಾದವರು ಹಾಜರಿದ್ದರು.

### ಸೈನಿಕರಿಗೆ ಬೆಂಬಲ ನೀಡಿ ನಾಗರೀಕರಿಂದ ಭಾವೈಕ್ಯತೆಯ ಪ್ರದರ್ಶನ

## ಮೇ 18ರಂದು ನಗರದಲ್ಲಿ ಬೃಹತ್ ತಿರಂಗ ಯಾತ್ರೆ

ತುಮಕೂರು: ಕಾಶ್ಮೀರದ ಪಹಲ್ಗಾಮ್‌ನಲ್ಲಿ ಧರ್ಮ ಕೇಳಿ ಪ್ರವಾಸಿಗರನ್ನು ಹತ್ಯೆ ಮಾಡಿದ ಪಾಕಿಸ್ತಾನಿ ಪ್ರಾಯೋಜಿತ ಉಗ್ರರಿಗೆ ಭಾರತೀಯ ಯೋಧರು ತಕ್ಕ ಪ್ರತ್ಯುತ್ತರ ನೀಡಿದ್ದಾರೆ. ಆಪರೇಷನ್ ಸಿಂಧೂರ್ ಕಾರ್ಯಾಚರಣೆಯಲ್ಲಿ ಪಾಕಿಸ್ತಾನದ ಉಗ್ರರ ಅಡಗು ತಾಣಗಳನ್ನು ಧ್ವಂಸ ಮಾಡಲಾಗಿದೆ. ಈ ಪರಿಸ್ಥಿತಿಯಲ್ಲಿ ದೇಶದ ಐಕ್ಯತೆಗಾಗಿ ರಾಷ್ಟ್ರಭಕ್ತಿ ಅನಾವರಣಗೊಳಿಸುವ ತಿರಂಗ ಯಾತ್ರೆಯನ್ನು ಇದೇ 18ರ ಭಾನುವಾರ ನಗರದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ವಿವಿಧ ಸಮಾಜ, ಸಂಘಸಂಸ್ಥೆಗಳ ಮುಖಂಡರು ಹೇಳಿದರು.

ಶುಕ್ರವಾರ ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಜಿಲ್ಲಾ ಕೈಗಾರಿಕಾ ಮತ್ತು ವಾಣಿಜ್ಯ ಸಂಸ್ಥೆ ನಿರ್ದೇಶಕ ಜಿ.ಆರ್.ಸುರೇಶ್, ಪಹಲ್ಗಾಮ್ ಹತ್ಯೆ ವಿರುದ್ಧ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಪಾಕಿಸ್ತಾನದ ವಿರುದ್ಧ ಹಲವಾರು ರಾಜತಾಂತ್ರಿಕ ನಿರ್ಧಾರಗಳನ್ನು ಕೈಗೊಂಡು ಉಗ್ರರ ಹುಟ್ಟಡಗಿಸುವ ಕ್ರಮ ಕೈಗೊಂಡಿದೆ. ಪಾಕಿಸ್ತಾನದಲ್ಲಿರುವ 9 ಉಗ್ರರ ಅಡಗು ತಾಣಗಳ ಮೇಲೆ ದಾಳಿ ನಡೆಸಿ 100ಕ್ಕೂ ಹೆಚ್ಚು ಉಗ್ರರನ್ನು ಸದೆಬಡಿದಿದೆ ಎಂದರು.

ಈ ಸಂದರ್ಭದಲ್ಲಿ ನಮ್ಮ ಸೈನಿಕರಿಗೆ ನೈತಿಕ



ಬೆಂಬಲ ನೀಡಲು, ಭಾರತೀಯರೆಲ್ಲಾ ಒಂದಾಗಿ ದೇಶಭಕ್ತಿ ಪ್ರದರ್ಶಿಸುವ ಭಾವನಾತ್ಮಕ ಕಾರ್ಯಕ್ರಮವಾಗಿ ಈ ತಿಂಗಳ 18ರ ಭಾನುವಾರ ನಗರದಲ್ಲಿ ಸಾವಿರಾರು ಜನರು ಒಳಗೊಂಡ ಬೃಹತ್ ತಿರಂಗ ಯಾತ್ರೆ ಹಮ್ಮಿಕೊಳ್ಳಲಾಗಿದೆ. ಅಂದು ಬೆಳಿಗ್ಗೆ 9 ಗಂಟೆಗೆ ಎಸ್‌ಐಟಿ ಕಾಲೇಜು ಮುಂಭಾಗದಿಂದ ಗಂಗೋತ್ರಿ ರಸ್ತೆ, ಎಸ್‌ಎಸ್‌ಪುರಂ ಮುಖ್ಯರಸ್ತೆ ಮೂಲಕ ಸರ್ಕಾರಿ ಜ್ಯೂನಿಯರ್ ಕಾಲೇಜು ಮೈದಾನದವರೆಗೆ ತಿರಂಗ ಯಾತ್ರೆ ನಡೆಯಲಿದೆ ಎಂದರು.

ವಿವಿಧ ಮಠಾಧೀಶರು, ಚರ್ಚ್ ಪಾದ್ರಿಗಳು, ಮಸೀದಿ ಮೌಲ್ವಿಗಳು, ವಿವಿಧ ರಾಜಕೀಯ ಮುಖಂಡರು, ವಿದ್ಯಾರ್ಥಿಗಳು, ಸಾರ್ವಜನಿಕರು ಅಲ್ಲದೆ, ಕೈಗಾರಿಕೋದ್ಯಮಿಗಳು, ಕಾರ್ಮಿಕ ಸಂಘಟನೆಗಳು, ಮಹಿಳಾ ಸಂಘಟನೆಗಳು, ಕನ್ನಡಪರ ಸಂಘಟನೆಗಳು, ಶಿಕ್ಷಣ ಸಂಸ್ಥೆಗಳು, ಜಿಲ್ಲಾ ವೈದ್ಯರ ಸಂಘ, ಜಿಲ್ಲಾ ವಕೀಲರ ಸಂಘ, ದಲಿತ ಸಂಘಟನೆಗಳು, ಆಟೋ ಚಾಲಕರ ಸಂಘ, ಸಹಕಾರಿ ಬ್ಯಾಂಕುಗಳು, ನಿವೃತ್ತ ಸೈನಿಕರ ಸಂಘ, ದಕ್ಷಿಣ ಕನ್ನಡ ಮಿತ್ರಬಳಗ ಸೇರಿದಂತೆ ಹಲವಾರು ಸಂಘಟನೆಗಳು, ನಾಗರೀಕ ಮುಖಂಡರು ತಿರಂಗ ಯಾತ್ರೆಯಲ್ಲಿ ಪಾಲ್ಗೊಂಡು ದೇಶಭಕ್ತಿ ಪ್ರದರ್ಶಿಸುವರು ಎಂದು ಸುರೇಶ್ ಹೇಳಿದರು.

ದಲಿತ ಸಂಘರ್ಷ ಸಮಿತಿ ಜಿಲ್ಲಾಧ್ಯಕ್ಷ ಪಿ.ಎನ್.ರಾಮಯ್ಯ ಮಾತನಾಡಿ, ಪಹಲ್ಗಾಮ್ ಹತ್ಯೆ ವಿರುದ್ಧ ಪ್ರಧಾನಿ ಮೋದಿ ಸರ್ಕಾರ ಉಗ್ರರಿಗೆ ತಕ್ಕ ಉತ್ತರ ನೀಡಿದೆ. ಭಾರತದ ಯಾವುದೇ ಪ್ರಜೆ, ಹೆಣ್ಣುಮಕ್ಕಳ ತಂಟೆಗೆ ಬಂದರೆ ತಕ್ಕ ಶಾಸ್ತಿ ಅನುಭವಿಸಬೇಕಾಗುತ್ತದೆ ಎಂಬುದನ್ನು ಮೋದಿ ಸರ್ಕಾರ ಈ ಮೂಲಕ ಜಗತ್ತಿಗೆ ಸಾರಿದೆ. ಇಂತಹ ಪರಿಸ್ಥಿತಿಯಲ್ಲಿ ಜಾತಿ, ಧರ್ಮ, ಪಕ್ಷ ಮೀರಿ ದೇಶದ ಐಕ್ಯತೆಗೆ ಎಲ್ಲರೂ ಒಂದಾಗಿ ಭಾರತೀಯ ಸೈನಿಕರಿಗೆ ಬೆಂಬಲ ವ್ಯಕ್ತಪಡಿಸಬೇಕು ಎಂದು ಹೇಳಿದರು.

ಜಿಲ್ಲಾ ವೈದ್ಯರ ಸಂಘದ ಡಾ.ಕೆ.ಪಿ.ಸುರೇಶ್‌ಬಾಬು ಮಾತನಾಡಿ, ಭಾರತೀಯ ಪ್ರವಾಸಿಗರನ್ನು ಹತ್ಯೆ ಮಾಡಿದ ಭಯೋತ್ಪಾದಕರನ್ನು ರಕ್ಷಣೆ ಮಾಡುತ್ತಿರುವ ಪಾಕಿಸ್ತಾನದ ಮೇಲಿನ ಪ್ರತೀಕಾರದ ಆಪರೇಷನ್ ಸಿಂಧೂರ ಕಾರ್ಯಾಚರಣೆ ಯಶಸ್ವಿಯಾಗಿದ್ದು, ಪರಾಕ್ರಮದಿಂದ ಪಾಕಿಸ್ತಾನಕ್ಕೆ ಪಾಠ ಕಲಿಸಿದ ಭಾರತೀಯ ಸೈನ್ಯದೊಂದಿಗೆ, ರಾಷ್ಟ್ರ ರಕ್ಷಣೆಗಾಗಿ ನಾವೆಲ್ಲಾ ಜೊತೆಯಾಗಬೇಕಾದ ಸಮಯವಿದು ಎಂದರು.

ನಗರ ವೀರಶೈವ ಸಮಾಜ ಸೇವಾ ಸಮಿತಿ ಅಧ್ಯಕ್ಷ ಎಸ್.ಜಿ.ಚಂದ್ರಮೌಳಿ, ಜೈನ ಸಮಾಜದ ಆರ್.ಎ.ಸುರೇಶ್‌ಕುಮಾರ್, ಮರಾಠ ಸಮಾಜದ ಸುರೇಶ್ ರಾವ್, ಆರ್ಯ ಈಡಿಗರ ಸಂಘದ ಜಿಲ್ಲಾಧ್ಯಕ್ಷ ಎಂ.ನಾಗರಾಜು, ಕನ್ನಡಪರ ಸಂಘಟನೆಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಶಂಕರ್, ಮೈತ್ರಿ ಸಂಘಟನೆಯ ಗಂಗಾ ಪರಮೇಶ್, ಸುಧಾ ಶಶಿಕುಮಾರ್, ನಾಗಾರ್ಜುನ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಶಿವನಂಜಪ್ಪ, ನೇಕಾರರ ಸಮಾಜದ ರಾಮಕೃಷ್ಣಯ್ಯ ಮೊದಲಾದವರು ಭಾಗವಹಿಸಿದ್ದರು.

## ಪಾವಗಡ ಸರಕಾರಿ ಆಸ್ಪತ್ರೆಗೆ ಬೀಗ ಹಾಕೋದೇ ಲೇಸು: ಕಾರಜೋಳ



ಪಾವಗಡ:: ಪಾವಗಡ ಪಟ್ಟಣದ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಶುಕ್ರವಾರ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಸಂಸದ ಗೋವಿಂದ ಕಾರಜೋಳ ಅವರು ದಿಢೀರ್ ಭೇಟಿ ನೀಡಿದರು

ಈ ಸಂದರ್ಭದಲ್ಲಿ ಆಸ್ಪತ್ರೆಯಲ್ಲಿ ವೈದ್ಯರ ಕೊರತೆಯ ಬಗ್ಗೆ ತಾಲೂಕು ವೈದ್ಯಾಧಿಕಾರಿ ಡಾಕ್ಟರ್ ಬಾಬು ಅವರಿಂದ ಮಾಹಿತಿಯನ್ನು ಪಡೆದುಕೊಂಡು, ಆರೋಗ್ಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹರ್ಷ ಗುಪ್ತ ಅವರಿಗೆ ಕರೆ ಮಾಡಿ ಆಸ್ಪತ್ರೆಯಲ್ಲಿನ ವೈದ್ಯರ ಸಮಸ್ಯೆಯನ್ನು ಮನವರಿಕೆ ಮಾಡಿದರು ಶೀಘ್ರದಲ್ಲಿಯೇ ಆಸ್ಪತ್ರೆಯಲ್ಲಿ ವೈದ್ಯರ ಕೊರತೆಗೆ ಸಂಬಂಧಿಸಿದ ಸಭೆಯನ್ನು ಏರ್ಪಡಿಸಿ ಸಮಸ್ಯೆಯನ್ನು ಬಗೆಹರಿಸುವಂತೆ ಒತ್ತಾಯಿಸಿದರು.

ಆಸ್ಪತ್ರೆಯ ಕೊಠಡಿಗಳಿಗೆ ಸಂಸದರು ತೆರಳಿದಾಗ ಕೇವಲ ಇಬ್ಬರು ವೈದ್ಯರಿದ್ದರು ಇಷ್ಟು ದೊಡ್ಡ ಬೃಹತ್ ಆಸ್ಪತ್ರೆ ವೈದ್ಯರಿಲ್ಲದೆ ಜಿನುಗುಡುತ್ತಿದೆ ಪ್ರತಿನಿತ್ಯ ಸಾವಿರಾರು ಸಂಖ್ಯೆಯಲ್ಲಿ ಬರುವಂತಹ ರೋಗಿಗಳಿಗೆ ಕೇವಲ ಇಬ್ಬರು ವೈದ್ಯರೇ ಎಷ್ಟು ಸೇವೆ ಅಂತ ಮಾಡ್ತಾರೆ ಎಂದು ಬೇಸರಿಸಿದರು.

ಈ ವೇಳೆ ಜಿಲ್ಲಾ ಜೆಡಿಎಸ್ ಅಧ್ಯಕ್ಷ ಅರ್.ಸಿ.ಅಂಜನಪ್ಪ ಮಾಜಿ ಶಾಸಕರಾದ ಕೆ ಎಂ ತಿಮ್ಮರಾಯಪ್ಪ ಮತ್ತಿತರರು ಇದ್ದರು

## ಪತ್ರಿಕೋದ್ಯಮ ಜನಪರವಾಗಿರಬೇಕು: ಡಾ.ಎಂ.ಎಸ್.ರವಿಪ್ರಕಾಶ್

ತುಮಕೂರು: ವಿದ್ಯಾರ್ಥಿ ದೆಸೆಯಿಂದಲೇ ಪತ್ರಿಕಾರಂಗ ನೌಪುಣ್ಯಗಳನ್ನು ಕಲಿತುಕೊಂಡರೆ ವೃತ್ತಿಪರ ಪತ್ರಿಕೋದ್ಯಮ ಕ್ರಿಯಾಶೀಲತೆಯಿಂದ ಮತ್ತು ಜನಪರವಾಗಿ ಕೂಡಿರುತ್ತದೆ ಎಂದು ಶ್ರೀ ಸಿದ್ಧಾರ್ಥ ತಾಂತ್ರಿಕ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ಎಂ.ಎಸ್ ರವಿಪ್ರಕಾಶ್ ಅವರು ಅಭಿಮತ ವ್ಯಕ್ತಪಡಿಸಿದರು.

ನಗರದ ಶ್ರೀ ಸಿದ್ಧಾರ್ಥ ತಾಂತ್ರಿಕ ಕಾಲೇಜಿನ ಆವರಣದಲ್ಲಿ ಶ್ರೀ ಸಿದ್ಧಾರ್ಥ ಮಾಧ್ಯಮ ಅಧ್ಯಯನ ಕೇಂದ್ರದ ಸ್ನಾತಕೋತ್ತರ ವಿದ್ಯಾರ್ಥಿಗಳು ಪ್ರಕಟಿಸುತ್ತಿರುವ 'ಸಿದ್ಧಾರ್ಥ ಸಂಪದ' ವಿಶೇ? ಸಂಚಿಕೆ ಬಿಡುಗಡೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿ ದೆಸೆಯಿಂದ ಪ್ರಾಯೋಗಿಕ ಕಾರ್ಯಗಳಲ್ಲಿ ಹೆಚ್ಚಾಗಿ ತೊಡಗಿಸಿಕೊಂಡಾಗ ನಿವೃತ್ತಿ ಬದುಕಿನಲ್ಲಿ ಹೆಚ್ಚಿನ ಯಶಸ್ಸನ್ನು ಪಡೆಯಬಹುದು ಎಂದರು.

ಪತ್ರಿಕೋದ್ಯಮವು ಕಾರ್ಯನಿರ್ವಹಿಸುವ



ಸಮಾಜಕ್ಕೆ ನಿರ್ಣಾಯಕವಾಗಿದೆ ಏಕೆಂದರೆ ಅದು ಸಾರ್ವಜನಿಕರಿಗೆ ಮಾಹಿತಿ ಖಚಿತಪಡಿಸುತ್ತದೆ. ಪತ್ರಿಕೋದ್ಯಮವು ಭ್ರ?ಾಚಾರವನ್ನು ಬಹಿರಂಗಪಡಿಸುತ್ತದೆ, ತಪ್ಪುಗಳನ್ನು ತನಿಖೆ ಮಾಡುತ್ತದೆ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಪ್ರತಿಪಾದಿಸುತ್ತದೆ ಎಂದು ಡಾ.ಎಂ.ಎಸ್ ರವಿಪ್ರಕಾಶ್ ಅವರು ನುಡಿದರು.

ಶೈಕ್ಷಣಿಕ ವಿಭಾಗದ ಡೀನ್ ಡಾ.ಎಸ್.ರೇಣುಕಾಲತಾ ಮಾತನಾಡಿ, ಪತ್ರಕರ್ತರಾಗಿರುವುದು ಜನರ ಗ್ರಹಿಕೆಗಳನ್ನು ರೂಪಿಸುವಲ್ಲಿ ಮಹತ್ತರವಾದ ಸ್ಥಾನದಲ್ಲಿ ನಿಮ್ಮನ್ನು ಇರಿಸುತ್ತದೆ. ಸತ್ಯಗಳನ್ನು ವರದಿ ಮಾಡುವುದಾಗಲಿ ಅಥವಾ ಅಭಿಪ್ರಾಯಗಳನ್ನು ಮಂಡಿಸುವುದಾಗಲಿ, ಪತ್ರಕರ್ತರು ಸಾರ್ವಜನಿಕರಿಗೆ ಪ್ರಮುಖ ವಿ?ಯಗಳ ಬಗ್ಗೆ ಶಿಕ್ಷಣ ನೀಡುವ ಗುರಿಯನ್ನು ಹೊಂದಿದ್ದಾರೆ. ಆದ್ದರಿಂದ ಅಧ್ಯಯನದ ಹಂತದಲ್ಲಿ ಪ್ರಾಯೋಗಿಕ ಕಾರ್ಯ ಉತ್ತಮವಾಗಿದೆ. ಪತ್ರಿಕೆ ಬಹಳ ಅಚ್ಚುಕಟ್ಟಾಗಿ ಮತ್ತು ವೃತ್ತಿಪರವಾಗಿ ಮೂಡಿ ಬಂದಿದೆ ಎಂದು ಆಶಿಸಿದರು.

ಪತ್ರಿಕೆ ಬಿಡುಗಡೆ ಕಾರ್ಯಕ್ರಮದಲ್ಲಿ ಕಂಪ್ಯೂಟರ್ ಸೈನ್ಸ್ ವಿಭಾಗದ ಪ್ರಾಧ್ಯಾಪಕರು ಹಾಗೂ ಐಕ್ಯೂಎಸ್‌ಸಿ ಘಟಕದ ಸಂಚಾಲಕರು ಆದ ಡಾ.ವಿ.ರವಿರಾಮ್, ಮೆಕಾನಿಕ್ ವಿಭಾಗದ ಸಹ ಪ್ರಾಧ್ಯಾಪಕರಾದ ಡಾ.ಎಸ್.ಮನು, ಶ್ರೀ ಸಿದ್ಧಾರ್ಥ ಮಾಧ್ಯಮ ಅಧ್ಯಯನ ಕೇಂದ್ರದ ನಿರ್ದೇಶಕರಾದ ಡಾ.ಬಿ.ಟಿ.ಮುದ್ದೇಶ್, ಸಹಾಯಕ ಪಾಧ್ಯಾಪಕರಾದ ಡಾ.ಸಿ.ಜ್ಯೋತಿ, ಶ್ವೇತಾ ಎಂ.ಪಿ, ನವೀನ್ ಎನ್.ಜಿ., ರವಿಕುಮಾರ್, ಗ್ರಾಫಿಕ್ಸ್ ವಿನ್ಯಾಸಗಾರ ಶಿವಕುಮಾರ್, ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು. ಸಂಚಿಕೆಯ ವಿದ್ಯಾರ್ಥಿ ಸಂಪಾದಕರಾದ ಕೀರ್ತನ ಪ್ರಾಸ್ತವಿಕವಾಗಿ ಮಾತನಾಡಿ, ಸುದ್ದಿ ವರದಿ, ಸಂಪಾದನೆ ಮತ್ತು ವಿನ್ಯಾಸದಲ್ಲಿನ ಕಲಿಕೆಯ ಪ್ರಗತಿಯನ್ನು ವಿವರಿಸಿ, ಅತಿಥಿಗಳನ್ನು ಸ್ವಾಗತಿಸಿದರು.

## ಬೆಸ್ಕಾಂ: ಇಂದು ಗ್ರಾಮೀಣ ಉಪ ವಿಭಾಗದಲ್ಲಿ ಗ್ರಾಹಕರ ಸಂವಾದ ಸಭೆ

ತುಮಕೂರು: ಬೆಸ್ಕಾಂ ಗ್ರಾಮೀಣ ಉಪವಿಭಾಗ-2ಕ್ಕೆ ಸಂಬಂಧಿಸಿದಂತೆ ಮೇ 17ರಂದು ಮಧ್ಯಾಹ್ನ 3 ರಿಂದ 5:30 ಗಂಟೆವರೆಗೆ ಗ್ರಾಹಕರ ಸಂವಾದ ಸಭೆಯನ್ನು ಏರ್ಪಡಿಸಲಾಗಿದೆ.

ಭೀಮಸಂದ್ರ ನಗರ ಹಾಗೂ ಹೆಗ್ಗೆರೆ, ಮಲ್ಲಸಂದ್ರ, ದೊಡ್ಡನಾರವಂಗಲ, ಗೂಳೂರು, ಹೆತ್ತೇನಹಳ್ಳಿ, ಹೊಳಕಲ್, ನಾಗವಲ್ಲಿ, ಕಣಕುಪ್ಪೆ, ಗಂಗೋನಹಳ್ಳಿ, ಅರಿಯೂರು, ಹೆಬ್ಬೂರು ಗಳಿಗೇನಹಳ್ಳಿ, ಬಳ್ಳಗೆರೆ, ನಿಡುವಳಲು, ಸಿರಿವರ ಗ್ರಾಮ ಪಂಚಾಯತಿ ವ್ಯಾಪ್ತಿಯ ಗ್ರಾಹಕರಿಗಾಗಿ ಹೊರಪೇಟೆಯ ಬೆಸ್ಕಾಂ ಉಪವಿಭಾಗ ಕಚೇರಿಯಲ್ಲಿ ಗ್ರಾಹಕರ ಸಂವಾದ ಸಭೆ ನಡೆಯಲಿದ್ದು, ಗ್ರಾಹಕರು ಸಭೆಗೆ ಹಾಜರಾಗಿ ತಮ್ಮ ಕುಂದು ಕೊರತೆಗಳನ್ನು ಸಲ್ಲಿಸಿ ಪರಿಹರಿಸಿಕೊಳ್ಳಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

### ನೇರಳೆಕೆರೆ ಗ್ರಾಮದ ಧಾರ್ಮಿಕ ಕಾರ್ಯಕ್ರಮದಲ್ಲಿ ಸಹಕಾರ ಸಚಿವ ಕೆ.ಎನ್.ರಾಜಣ್ಣ

## 300 ಕೋಟಿ ರೂ. ವೆಚ್ಚದಲ್ಲಿ ತಾಲ್ಲೂಕಿನ ಎಲ್ಲಾ ಕೆರೆಗಳ ದುರಸ್ತಿ

ಮಧುಗಿರಿ: ತಾಲೂಕಿಗೆ ಎತ್ತಿನಹೊಳೆ ಯೋಜನೆಯಡಿ ಎಲ್ಲಾ ಕೆರೆಗಳ ದುರಸ್ತಿ ಕಾರ್ಯ ಕೈಗೊಳ್ಳಲು 300 ಕೋಟಿ ರೂಗಳು ಬಿಡುಗಡೆಯಾಗಿದ್ದು, ಮುಂದಿನ ತಿಂಗಳು ಮುಖ್ಯಮಂತ್ರಿ ಸಿದ್ದರಾಮಯ್ಯರವರಿಂದ ಚಾಲನೆ ನೀಡಲಿದ್ದಾರೆ ಎಂದು ಸಹಕಾರ ಸಚಿವರಾದ ಕೆ ಎನ್ ರಾಜಣ್ಣ ತಿಳಿಸಿದ್ದಾರೆ.

ತಾಲೂಕಿನ ಮಿಡಿಗೇಶಿ ಹೋಬಳಿ ನೇರಳೆಕೆರೆ ಗ್ರಾಮದಲ್ಲಿ ಗುರುವಾರ ದೊಡ್ಡಗೊಲ್ಲರಹಟ್ಟಿ ಮತ್ತು ಚಿಕ್ಕ ಗೊಲ್ಲರಹಟ್ಟಿ ವತಿಯಿಂದ ಹಮ್ಮಿಕೊಂಡಿದ್ದ ಚಿತ್ರಲಿಂಗೇಶ್ವರ ಮತ್ತು ಬೊಮ್ಮಲಿಂಗೇಶ್ವರ ಮತ್ತು ಈರ ಕರಿಯಪ್ಪ ಸ್ವಾಮಿ ದೇವರುಗಳ ಪ್ರತಿಷ್ಠಾಪನಾ ಮಹೋತ್ಸವ ಮತ್ತು ದೇವಸ್ಥಾನದ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿ ಅವರು ಹಾಸನ ಜಿಲ್ಲೆಯಲ್ಲಿ ಶ್ರೀಮತಿ ಸತ್ಯಭಾಮ



ಜಿಲ್ಲಾಧಿಕಾರಿಯಾಗಿರದಿದ್ದರೆ ಮತ್ತು ನಾನು ಹಾಸನ ಜಿಲ್ಲಾ ಉಸ್ತುವಾರಿ ಸಚಿವರಾಗದಿದ್ದರೆ ಈ ಭಾಗಕ್ಕೆ ಎತ್ತಿನಹೊಳೆ ನೀರು ಹರಿಯುತ್ತಿರಲಿಲ್ಲ. ಆ ಭಾಗದಲ್ಲಿ ಬಲಾಢ್ಯರನ್ನು ಎದುರಿಸಿ ಕಾಮಗಾರಿ ಪ್ರಾರಂಭಿಸಲು ಸತ್ಯಭಾಮ ರವರ ಸಹಕಾರ ಅತೀ ಹೆಚ್ಚಾಗಿದೆ. ಎತ್ತಿನ ಹೊಳೆ ಯೋಜನೆ ಜಾರಿಯಿಂದಾಗಿ ಈ ಭಾಗದ ರೈತರಿಗೆ ಬಹಳಷ್ಟು ಅನುಕೂಲವಾಗಲಿದ್ದು, ತ್ವರಿತವಾಗಿ ಯೋಜನೆ ಪೂರ್ಣಗೊಳಿಸಲಾಗುವುದು ಎಂದರು.

ಪೋಷಕರು ಮಕ್ಕಳನ್ನು ವಿದ್ಯೆಯಿಂದ ವಂಚಿತರನ್ನಾಗಿ ಮಾಡಬಾರದು ಮಕ್ಕಳಿಗೆ ಉತ್ತಮ ಭವಿಷ್ಯ ರೂಪಿಸಬೇಕು ಪ್ರತಿಯೊಬ್ಬರು ವಿದ್ಯಾವಂತರಾಗಬೇಕು ಅದರಲ್ಲೂ ಮಹಿಳೆಯರು ಸತ್ಯಭಾಮರವರನ್ನು ನೋಡಿ ಹೆಮ್ಮೆ ಪಡಬೇಕು ಮತ್ತು ಪೋಷಕರು ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಬೇಕು ಅದಕ್ಕೆ ಸ್ಪಷ್ಟ ಉದಾಹರಣೆ ಈ ಭಾಗದ ಮಹಿಳೆಯ ಸತ್ಯಭಾಮರವರು. ಹೆಣ್ಣು ಮಕ್ಕಳು ಉತ್ತಮ ಶಿಕ್ಷಣ ಪಡೆದು ಅವರಂತೆ ಉನ್ನತ ಹುದ್ದೆ ಅಲಂಕರಿಸಬೇಕು ಎಂದರು.

ಈ ಭಾಗದ ರಸ್ತೆ ಅಭಿವೃದ್ಧಿಗಾಗಿ 80 ಲಕ್ಷ ರೂಪಾಯಿ ಬಿಡುಗಡೆಯಾಗಿದ್ದು, ಸುತ್ತಮುತ್ತ ರೈತರು ರಸ್ತೆಯ ಎರಡು ಭಾಗದಲ್ಲಿ ಆರು ಅಡಿ ಜಮೀನು ಕೊಟ್ಟರೆ ರಸ್ತೆ ಅಭಿವೃದ್ಧಿ ಮಾಡಬಹುದು ಎಂದರು. ಅನ್ನಭಾಗ್ಯ ಜನರನ್ನು ಹಸಿವಿನಿಂದ ದೂರ ಇಟ್ಟಿದೆ. ಹಸಿವನ್ನು ನಿವಾರಣೆ ಮಾಡಿದವರು ಸಿದ್ದರಾಮಯ್ಯನವರು. ಕ್ಷೇತ್ರದ ಶೇ. 90 ರಷ್ಟು ಗೊಲ್ಲರಹಟ್ಟಿಗಳಲ್ಲಿ ನನಗೆ ಚುನಾವಣಾ ಸಂದರ್ಭದಲ್ಲಿ ಪೂರ್ಣ ಮತ ನೀಡಿದ್ದರಿಂದ ಶಾಸಕರಾಗಿ, ಸಚಿವರಾಗಲು ಸಾಧ್ಯವಾಯಿತು ನನ್ನ ಗೆಲುವಿಗೆ ಯಾದವ ಸಮುದಾಯ ಮತ್ತು ಧ್ವನಿ ಇಲ್ಲದ ಸಮುದಾಯಗಳು ಆಶೀರ್ವಾದ ಮಾಡಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಶ್ರೀ ಕ್ಷೇತ್ರ ಸಿದ್ದರಬೆಟ್ಟದ ಶ್ರೀ ವೀರಭದ್ರ ಶಿವಾಚಾರ್ಯ ಸ್ವಾಮೀಜಿ, ಹೊನಕಲ್ ಮಠದ ಬಸವ ರಮಾನಂದ ಸ್ವಾಮೀಜಿ, ಹಾಸನ ಜಿಲ್ಲಾಧಿಕಾರಿ ಸತ್ಯಭಾಮ, ಜಿ.ಪಂ ಮಾಜಿ ಅಧ್ಯಕ್ಷೆ ಶಾಂತಲಾ ರಾಜಣ್ಣ, ಉಪವಿಭಾಗಾಧಿಕಾರಿ ಗೋಟೂರು ಶಿವಪ್ಪ, ಡಿ ವೈ ಎಸ್ ಪಿ ಮಂಜುನಾಥ್, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಜಿ.ಜೆ. ರಾಜಣ್ಣ ಮತ್ತಿತರರು ಹಾಜರಿದ್ದರು

## ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಪ್ರವಾಸ ಮುಂದೂಡಿಕೆ

ತುಮಕೂರು: ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ: ಪುರುಷೋತ್ತಮ ಬಿಳಿಮಲೆ ಅವರು ಮೇ 20ರಂದು ಜಿಲ್ಲೆಯಲ್ಲಿ ಕೈಗೊಂಡಿದ್ದ ಪ್ರವಾಸವನ್ನು ಕಾರಣಾಂತರಗಳಿಂದ ಮುಂದೂಡಲಾಗಿದೆ. ಅಂದು ನಡೆಸಬೇಕಿದ್ದ ಕನ್ನಡ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆ, ಜಿಲ್ಲಾ ಕನ್ನಡ ಪರ ಸಂಘಟನೆ ಹಾಗೂ ಹೋರಾಟಗಾರರೊಂದಿಗೆ ಸಭೆಯ ದಿನಾಂಕವನ್ನು ನಂತರ ತಿಳಿಸಲಾಗುವುದು ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಚೇರಿ ತಿಳಿಸಿದೆ.

# ತುಮಕೂರು: ಮೇ 20ರವರೆಗೆ ಯೆಲ್ಲೋ ಅಲರ್ಟ್ ಘೋಷಣೆ



ತುಮಕೂರು: ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆಯಂತೆ ಜಿಲ್ಲೆಯಲ್ಲಿ ಮೇ 20ರವರೆಗೆ ಭಾರಿ ಪ್ರಮಾಣದ ಗುಡುಗು–ಸಿಡಿಲು ಸಹಿತ ಗಾಳಿ–ಮಳೆಯಾಗುವ ಸಾಧ್ಯತೆ ಇರುವುದರಿಂದ ಯೆಲ್ಲೋ ಅಲರ್ಟ್ ಘೋಷಿಸಲಾಗಿದ್ದು, ಜಿಲ್ಲಾ/ತಾಲ್ಲೂಕು/ಗ್ರಾಮ ಮಟ್ಟದ ಅಧಿಕಾರಿ/ಸಿಬ್ಬಂದಿಗಳು ಮುಂಜಾಗ್ರತಾ ಕ್ರಮಗಳನ್ನು ವಹಿಸುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷ ಶುಭ ಕಲ್ಯಾಣ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಜಿಲ್ಲೆಯಲ್ಲಿ ಪೂರ್ವ ಮುಂಗಾರು ಹಂಗಾಮಿನಲ್ಲಿ ಈವರೆಗೆ ಶೇ.134ರಷ್ಟು ಅಧಿಕ ಮಳೆಯಾಗಿದ್ದು, ಪ್ರವಾಹ/ಭಾರಿ ಮಳೆಯಿಂದ ಯಾವುದೇ ಜನ–ಜಾನುವಾರುಗಳ ಜೀವ ಹಾನಿಯಾಗದಂತೆ ಮುಂಜಾಗ್ರತೆವಹಿಸಬೇಕು

ಭಾರಿ ಮಳೆ/ಪ್ರವಾಹದಿಂದ ಯಾವುದೇ ಅಹಿತಕರ ಘಟನೆಯಾಗದಂತೆ ಪ್ರತಿ ಗ್ರಾಮಗಳಲ್ಲಿ ಡಂಗೂರ ಸಾರುವುದು/ಮೈಕ್ ಮೂಲಕ ಜನರಿಗೆ ಜಾಗೃತಿ ಮೂಡಿಸಬೇಕು. ನಿರಂತರ ಮಳೆಯಿಂದ ದುರ್ಬಲ ಮಣ್ಣಿನ ಮನೆ/ಕಟ್ಟಡ, ಮರದ ಕೊಂಬೆ, ಜಲಕಾಯ, ವಿದ್ಯುತ್ ವಸ್ತುಗಳಿಂದ ದೂರವಿರುವ ಬಗ್ಗೆ ಎಚ್ಚರವಹಿಸಲು ವ್ಯಾಪಕ ಪ್ರಚಾರ ನೀಡಬೇಕು. ಶಾಲಾ/ಅಂಗನವಾಡಿ ಮೇಲ್ಛಾವಣಿ/ಗೋಡೆ ಹಾಗೂ ನದಿ/ಹಳ್ಳ/ಕೆರೆ/ಕಟ್ಟೆ/ರಸ್ತೆ/ಸೇತುವೆ/ವಿದ್ಯುತ್ ಸಂಪರ್ಕ ಇತ್ಯಾದಿ ಮೂಲಭೂತ ಸೌಕರ್ಯಗಳ ಸುಸ್ಥಿತಿ ಬಗ್ಗೆ ಪರಿಶೀಲಿಸಬೇಕು. ಹಠಾತ್ ಪ್ರವಾಹವಾಗುವ ತಗ್ಗು ಪ್ರದೇಶದ ವಾರ್ಡ್/ಅಂಡರ್ ಪಾಸ್/ರಸ್ತೆಗಳ ಕುರಿತು ಮುನ್ನೆಚ್ಚರಿಕೆ ವಹಿಸಬೇಕು ಹಾಗೂ ಅರ್ಹ ಪ್ರಕರಣಗಳಿಗೆ ನಿಯಮಾನುಸಾರ ಎನ್‌ಡಿಆರ್‌ಎಫ್ ಮಾರ್ಗಸೂಚಿಯಂತೆ ತುರ್ತು ಪರಿಹಾರ ನೀಡಬೇಕೆಂದು ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

# ಅಭಿವೃದ್ಧಿ ಕಾಣದ ವೆಂಕಟಾಪುರ ಗ್ರಾಮ ಪಂಚಾಯತ್; ನಿರಾಸಕ್ತ ಅಧಿಕಾರಿ ವರ್ಗ

ಪಾವಗಡ : ತಾಲೂಕಿನ ವೆಂಕಟಾಪುರ ಗ್ರಾಮ ಪಂಚಾಯತಿಯಲ್ಲಿನ ಅಭಿವೃದ್ಧಿ ಅಧಿಕಾರಿಗಳು ಪಂಚಾಯತಿಗೆ ಬಾರದೆ ಅಭಿವೃದ್ಧಿ ಕಾರ್ಯಗಳು ಕುಂಟಿತಗೊಂಡಿವೆ ಎಂದು ಸಾರ್ವಜನಿಕರು ಆರೋಪಿಸಿದ್ದಾರೆ

ಪಂಚಾಯಿತಿ ವ್ಯಾಪ್ತಿಯ ಹಳ್ಳಿಗಳು ಹಲವಾರು ಮೂಲ ಸೌಲಭ್ಯದಿಂದ ನರಳುತ್ತಿದ್ದು , ಸ್ಥಳದಲ್ಲಿದ್ದು ಯೋಜನೆಯನ್ನು ಸಮರ್ಪಕವಾಗಿ ಕಾರ್ಯರೂಪಕ್ಕೆ ತರಬೇಕಾದ ಪಿಡಿಓ ಹಾಗೂ ಸಿಬ್ಬಂದಿಯವರು ಅನಧಿಕೃತವಾಗಿ ಗೈರು ಹಾಜರಾಗುತ್ತಿದ್ದರಿಂದ ಗ್ರಾಮಸ್ಥರಿಗೆ ದಿಕ್ಕು ತೋಚದಂತಾಗಿದೆ

ವೆಂಕಟಾಪುರ ಗ್ರಾಮ ಪಂಚಾಯಿತಿಯಲ್ಲಿ ಕಂಪ್ಯೂಟರ್ ಆಪರೇಟರ್ ಬಡ್ತಿ ಪಡೆದು ಬೇರೊಂದು ಪಂಚಾಯಿತಿಗೆ ವರ್ಗಾವಣೆಯಾಗಿದ್ದಾರೆ, ಇಲ್ಲಿಯವರೆಗೂ ಕಂಪ್ಯೂಟರ್ ಆಪರೇಟರ್ ಅನ್ನು ನೇಮಿಸಿಕೊಂಡಿಲ್ಲ, ಇದರಿಂದಾಗಿ ಇ ಖಾತೆ, ನರೇಗಾ ಸೇರಿದಂತೆ ಹಲವು ಕೆಲಸಗಳನ್ನು ಮಾಡಲು ಸಾಧ್ಯವಾಗುತ್ತಿಲ್ಲ,

ಇಲ್ಲಿನ ಸದಸ್ಯರ ಹೊಂದಾಣಿಕೆಯ ಕೊರತೆಯಿಂದಾಗಿ ಪಂಚಾಯಿತಿ ಅಬಿವೃದ್ಧಿ ಅಧಿಕಾರಿ ಕೆಲಸ ಮಾಡಲು ಆಗುತ್ತಿಲ್ಲ ಎಂದು ಕಛೇರಿಗೆ ಬರುತ್ತಿಲ್ಲ ಎಂದು ತಿಳಿದು ಬಂದಿದೆ

ಪ್ರಭಾರ ಪಿ.ಡಿ.ಒ ರವರು ವಾರಕ್ಕೊಮ್ಮೆ, ಮೂರು ದಿನಕ್ಕೊಮ್ಮೆ ಬರುತ್ತಿರುವುದರಿಂದ ಸಾರ್ವಜನಿಕರಿಗೆ ಸಮಸ್ಯೆಯಾಗಿದೆ, ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳನ್ನು ಸಮರ್ಪಕವಾಗಿ ಗ್ರಾಮ




ಪಂಚಾಯಿತಿ ಮಟ್ಟದಲ್ಲಿ ಅನುಷ್ಠಾನಗೊಂಡರೆ ಮಾತ್ರ ಅದು ಸಾರ್ವಜನಿಕರಿಗೆ ಮುಟ್ಟುತ್ತದೆ. ಆದರೆ, ಅದನ್ನು ಮುಟ್ಟಿಸುವ ಅಧಿಕಾರಿಗೇ ಕಛೇರಿಗೆ ಬರದಿದ್ದರೆ, ಅದನ್ನು ತಲುಪಿಸುವವರು ಯಾರು ಎಂಬ ಪ್ರಶ್ನೆ ಸಾರ್ವಜನಿಕರಲ್ಲಿ ಗಟ್ಟಿಯಾಗಿ ಕೇಳಿ ಬರುತ್ತಿದೆ

ಪಂಚಾಯಿತಿಯ ಆಂತರಿಕ ಕಲಹದಿಂದ ಹಿಂದೆ ಕಾರ್ಯನಿರ್ವಹಿಸಿದ ಅದಿಕಾರಿ ಬರಬೇಕು ಎಂದು ಸದಸ್ಯರ ಒಂದು ಗುಂಪು ಆಗ್ರಹಿಸಿದ್ದಾರೆ ಇದು ಮಾದ್ಯಮಗಳಲ್ಲಿ ಪ್ರಸಾರ ವಾಗಿತ್ತು, ಆದರೆ ಇಲ್ಲಿಯವರೆಗೂ ಮೇಲಾಧಿಕಾರಿಗಳು ಯಾವ ರೀತಿಯ ಕ್ರಮ ಕೈಗೊಂಡಿಲ್ಲ,

ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಪಂಚಾಯಿತಿ ಅಧ್ಯಕ್ಷರನ್ನು, ಹಿಂದಿನ ಪಿ.ಡಿ.ಒ ರವರನ್ನು ಕರೆಸಿ ಮಾತುಕತೆ ನಡೆಸಿ ಪಂಚಾಯಿತಿ ಅಬಿವೃದ್ಧಿಗೆ ಕ್ರಮ ಕೈಗೊಳ್ಳಬಹುದು ಆದರೆ, ಕಾರ್ಯನಿರ್ವಹಣಾಧಿಕಾರಿಗಳು ಯಾವುದೇ ರೀತಿಯ ಕ್ರಮ ಕೈಗೊಳ್ಳದೇ ಇರುವುದು ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ,

ಅಭಿವೃದ್ಧಿ ಕಾಮಗಾರಿಗಳು ನಡೆಯದೇ ಸಾರ್ವಜನಿಕರು ಪಂಚಾಯಿತಿ ಸದಸ್ಯರು ಪರಿತಪಿಸುತ್ತಿದ್ದಾರೆ ಎಂದರೆ ತಪ್ಪಾಗಲಾರದು,

ಅಭಿವೃದ್ಧಿ ಕಾರ್ಯಗಳಿಗೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಪಂಚಾಯಿತಿ ಅಧ್ಯಕ್ಷರ ಸಹಿ ಮುಖ್ಯವಾಗಿ ಬೇಕಾಗುತ್ತದೆ. ಆದರೆ, ಅಧ್ಯಕ್ಷರು ಇದ್ದು, ಪಿಡಿಒ ಇಲ್ಲದ್ದರಿಂದ ಯಾವುದೇ ಕಾಮಗಾರಿಗಳಿಗೆ ಅನುಮೋದನೆ ನೀಡಲು ಹಿನ್ನಡೆಯಾಗುತ್ತಿದೆ.

ಇದರಿಂದ ಪಿಡಿಒ ಇಲ್ಲದ ಗ್ರಾಮ ಪಂಚಾಯಿತಿ ಇದ್ದೂ ಇಲ್ಲದಂತೆ ಆಗಿ ಬೀಗ ಹಾಕುವ ಪರಿಸ್ಥಿತಿ ಬಂದಿದೆ ಎಂಬುದು ಸಾರ್ವಜನಿಕರ ಆರೋಪವಾಗಿದೆ,

ವೆಂಕಟಾಪುರ ಗ್ರಾಮ ಪಂಚಾಯಿತಿಗೆ ಕಳೆದ ಕೆಲವು ತಿಂಗಳಿನಿಂದ ಖಾಯಂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಇಲ್ಲದೇ ಅವ್ಯವಸ್ಥೆ ಸೃಷ್ಟಿಯಾಗಿದ್ದು, ಕೂಡಲೇ ಖಾಯಂ ಪಿ.ಡಿ.ಒ ರವರನ್ನು ಒದಗಿಸುವಂತೆ ಗ್ರಾ.ಪಂ ಸದಸ್ಯರು, ಸಾರ್ವಜನಿಕರು ತಾಲೂಕು ಪಂಚಾಯಿತಿ,ಜಿಲ್ಲಾ ಪಂಚಾಯಿತಿಗೆ ಆಗ್ರಹಿಸಿ ಮನವಿ ಪತ್ರ ಸಲ್ಲಿಸಿದ್ದರು. ಆದರೂ ಇನ್ನೂ ನೇಮಕವಾಗದಿರುವುದು ಸಾರ್ವಜನಿಕ ಆಕ್ರೋಶಕ್ಕೆ ಕಾರಣವಾಗಿದೆ.

ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ನೇತೃತ್ವದಲ್ಲಿ ಆಯಾ ಗ್ರಾಮ, ವಾರ್ಡ್‌ಗೆ ಸಂಬಂಧಿಸಿದಂತೆ ಕ್ರಿಯಾ ಯೋಜನೆ ರೂಪಿಸಿ ಕಾಮಗಾರಿಗಳಿಗೆ ಚಾಲನೆ ನೀಡಲಾಗುತ್ತಿದೆ. ಆದರೆ, ಅಧಿಕಾರಿಗಳೇ ಇಲ್ಲದಿದ್ದರೆ ಅವುಗಳನ್ನು ಮಾಡುವವರು ಯಾರು ಎನ್ನುವ ಪ್ರಶ್ನೆ ಕಾಡುತ್ತಿದೆ,

ಪ್ರಭಾರಿ ಅಧಿಕಾರ ವಹಿಸಿಕೊಂಡವರೂ ದೊಡ್ಡ ಮೊತ್ತದ ಕಾಮಗಾರಿಗಳಿಗೆ ಅನುಮೋದನೆ ನೀಡುತ್ತಿಲ್ಲ. ಇದರಿಂದ ಗ್ರಾಮಗಳ ಅಭಿವೃದ್ಧಿಗೆ ಹಿನ್ನಡೆಯಾಗುತ್ತಿದೆ ಎಂದು ಸದಸ್ಯರ ಆರೋಪವಾಗಿದೆ.

ಆದ್ದರಿಂದ ವೆಂಕಟಾಪುರ ಗ್ರಾಮ ಪಂಚಾಯಿತಿಗೆ ಆದಷ್ಟು ಬೇಗ ಕಂಪ್ಯೂಟರ್ ಆಪರೇಟರ್ ಅನ್ನು ಮತ್ತು ಖಾಯಂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ನೇಮಕ ಮಾಡಿ ಪಂಚಾಯಿತಿಯ ಅಬಿವೃದ್ಧಿಗೆ ಸಹಕರಿಸಬೇಕೆಂದು ಮೇಲಾಧಿಕಾರಿಗಳಲ್ಲಿ ಮನವಿ ಮಾಡಿಕೊಂಡಿದ್ದಾರೆ,

# ಕಬ್ಬಿಗೆರೆಯಲ್ಲಿ ಪೌರಾಣಿಕ ನಾಟಕೋತ್ಸವ ಯಶಸ್ವಿ



ತುಮಕೂರು: ಕೊರಟಗೆರೆ ತಾಲ್ಲೂಕು ಸಿ. ಎನ್. ದುರ್ಗ ಹೋಬಳಿ ಕಬ್ಬಿಗೆರೆ ಗೊಲ್ಲರಹಟ್ಟಿಯಲ್ಲಿ ಸಂಗೀತ ಪ್ರಿಯ ಜಿಲ್ಲಾ ರಂಗಭೂಮಿ ಕಲಾಸಂಘ ಬತ್ಸಂದ್ರ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದೊಂದಿಗೆ ನಡೆದ ಪೌರಾಣಿಕ ನಾಟಕಗಳ ಕಾರ್ಯಕ್ರಮವನ್ನು ಬಿ.ವಿ.ನಾಗಭೂಷಣ್ ರವರು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಅವರು ಮಾತನಾಡುತ್ತಾ ಗ್ರಾಮೀಣ ಹವ್ಯಾಸಿ ರಂಗಭೂಮಿಯಿಂದ ಹಲವು ರಂಗ ಕರ್ಮಿಗಳ ಬದುಕಿಗೆ ದಾರಿದೀಪವಾಗಿದ್ದು ನಾಡಿನಾದ್ಯಂತ ಹಳ್ಳಿ ಹಳ್ಳಿಗಳಲ್ಲಿ ಇತ್ತೀಚೆಗೆ ಪೌರಾಣಿಕ ನಾಟಕಗಳ ಪ್ರದರ್ಶನಗಳಸಂಖ್ಯೆ ಹೆಚ್ಚುತ್ತಿದ್ದು ಹವ್ಯಾಸಕ್ಕಾಗಿ ಸಾದರಪಡಿಸುವ ನಾಟಕಗಳಿಂದ ಬಹುಸಂಖ್ಯಾತ ರಂಗ ಕರ್ಮಿಗಳಾದ ನಾಟಕ ನಿರ್ದೇಶಕರು ವಸ್ತ್ರ ವರ್ಣಲಂಕಾರ ಸಂಗೀತ ಪರಿಕರ ವಾದ್ಯಗಾರರು ಸ್ತ್ರೀಪಾತ್ರ ನಿರ್ವಹಣೆ ಸ್ಥಿರ ಚಿತ್ರೀಕರಣ ಇನ್ನು ಉದ್ಘಾಟಿಸಿ ಮುಂತಾದವರ ಜೀವನೋಪಾಯ ಕಟ್ಟಿಕೊಳ್ಳಲು ನೆರವಾಗುತ್ತದೆ ಹವ್ಯಾಸ ರಂಗಭೂಯಲ್ಲಿಯಾರ ನೆರವನ್ನು ಪಡೆಯದೆ ಸುಮಾರು ಮೂರು ಲಕ್ಷಗಳಷ್ಟು ಹಣವನ್ನು ವ್ಯಯ ಮಾಡಿ ರಂಗಭೂಮಿ ಕಲೆಯನ್ನು ಉಳಿಸುತ್ತಿರುವ ಇಂತಹ ರಂಗತಂಡಗಳಿಗೆ ಪ್ರೋತ್ಸಾಹಗಳು ಹೆಚ್ಚು ಹೆಚ್ಚು ಸಿಕ್ಕಿದರೆ ಪುರಾಣ ಪ್ರಾಥಿನಿಧಿಕ ನಾಟಕಗಳು ಪ್ರದರ್ಶನಗೊಳ್ಳಲು ಅನುಕೂಲ ವಾಗುತ್ತದೆ ಎಂದರು ಗ್ರಾಮೀಣ ಪ್ರದೇಶದ ನಾಟಕ ನಿರ್ದೇಶಕರುಗಳಾದ ಕೃಷ್ಣಮೂರ್ತಿ ರಮೇಶ ಧನಂಜಯ್ ಮುತ್ತು ಬುಡಕಟ್ಟು ಕಲೆಯ ಹಿರಿಯ ಕಲಾವಿದರನ್ನು ಗೌರವಿಸಲಾಯಿತು ಎಂದರು.

ದಿವ್ಯಸಾನಿದ್ಯ ಬಾಲಕೃಷ್ಣ ಸ್ವಾಮೀಜಿ ವ್ಯವಸ್ಥಾಪಕ ಶಿವಣ್ಣ ರಂಗಯ್ಯ ದಾಸೇಗೌಡರು ಸಹಾಯಕ ನಿರ್ದೇಶಕ ರಮೇಶ್ ಗ್ರಾ ಪಂ ಸದಸ್ಯ ಮಧು ತಿಮ್ಮರಾಜು.ಹಿರಿಯ ರಂಗಭೂಮಿ ಕಲಾವಿದ ಸಿದ್ದಪ್ಪಇತರರಿದ್ದರು

ಸಾವಿರಾರು ಸಂಖ್ಯೆ ಪ್ರೇಕ್ಷಕರ ಸಮ್ಮುಖದಲ್ಲಿ ಮಹಾಭಾರತದ ಕೃಷ್ಣ ರಾಯಭಾರ. ಗೀತೋಪದೇಶ, ಕುರುಕ್ಷೇತ್ರ. ನಾಟಕ ಪ್ರದರ್ಶನ ಗೊಂಡವು.

# ಖಾಸಗಿ ಶಾಲೆಗಳಲ್ಲಿ ಅನಧಿಕೃತ ಹೆಚ್ಚುವರಿ ಶುಲ್ಕ ವಸೂಲಿ – ಕ್ರಮಕ್ಕೆ ಆಗ್ರಹ

## ಅಧಿಕೃತ ಶುಲ್ಕದ ವಿವರವನ್ನು ಶಾಲೆಯ ಫಲಕದಲ್ಲಿ ಪ್ರಕಟಿಸುವಂತೆ ಒತ್ತಾಯ

ತಿಪಟೂರು: ತಾಲೂಕಿನ ಖಾಸಗಿ ಶಾಲೆಗಳಲ್ಲಿ ಅಧಿಕೃತ ಶುಲ್ಕಕ್ಕಿಂತ ಅನಧಿಕೃತವಾಗಿ ಹೆಚ್ಚುವರಿ ಶುಲ್ಕವನ್ನು ಪೋಷಕರಿಂದ ವಸೂಲಿ ಮಾಡುತ್ತಿದ್ದು ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮನವಿ ಸಲ್ಲಿಸಿದ್ದು ಹೆಚ್ಚು ಶುಲ್ಕ ಪಡೆಯುತ್ತಿರುವ ಖಾಸಗಿ ಶಾಲೆಗಳ ಮೇಲೆ ಕ್ರಮ ಜರುಗಿಸುವಂತೆ ಸದೃಢ ಫೌಂಡೇಶನ್‌ನ ಪದಾಧಿಕಾರಿಗಳು ಒತ್ತಾಯಿಸಿದರು.

ನಗರದ ಕಲ್ಪತರು ಗ್ರ್ಯಾಂಡ್ ಹೋಟೆಲ್‌ನಲ್ಲಿ ಗುರುವಾರ ಸದೃಢ ಫೌಂಡೇಶನ್ ಕರೆದಿದ್ದ ಸುದ್ದಿಗೋಷ್ಠಿಯಲ್ಲಿ ಅಧ್ಯಕ್ಷ ಬಿ.ಜಿ. ಭೋಜರಾಜ ಮಾತನಾಡಿ, ಸರ್ಕಾರದ ಅಧಿನಿಯಮವನ್ನು ಇಲ್ಲಿನ ಖಾಸಗಿ ಶಾಲೆಗಳು ಪಾಲಿಸುತ್ತಿಲ್ಲ. ತಮಗೆ ಬೇಕಾದಂತೆ ನೀತಿ ನಿಯಮಗಳನ್ನು ಮಾಡಿಕೊಂಡಿವೆ. ಒಬ್ಬ ವಿದ್ಯಾರ್ಥಿಗೆ ಒಂದು ರೀತಿ ಶುಲ್ಕ ಇನ್ನೊಬ್ಬ ವಿದ್ಯಾರ್ಥಿಗೆ ಇನ್ನೊಂದು ರೀತಿ ಶುಲ್ಕ ವಸೂಲಿ ಮಾಡುತ್ತಾ ತಾರತಮ್ಯ ಮಾಡುತ್ತಿವೆ. ಸರ್ಕಾರ ಖಾಸಗಿ ಶಾಲೆಗಳಿಗೂ ಕೆಲ ನೀತಿ ನಿಯಮಗಳನ್ನು ಜಾರಿಗೆ ತಂದಿದೆ ಆದರೆ ಅದು ನೆಪಮಾತ್ರಕ್ಕೆಂಬತಾಗಿದೆ. ಖಾಸಗಿ ಶಾಲೆಗಳು ಅನುಮೋದಿತ ಅಧಿಕೃತ ಶುಲ್ಕದ ವಿವರನ್ನು ಶಾಲೆಯ ಫಲಕದಲ್ಲಿ ಪ್ರಕಟಿಸದೆ ಪೊಷಕರಿಂದ ಮಿತಿಗೆ ಮೀರಿ ಶುಲ್ಕವನ್ನು ವಸೂಲಿ ಮಾಡುತ್ತಿದ್ದಾರೆ. ಪೋಷಕರುಗಳು ಮಧ್ಯಮ ವರ್ಗದವರು, ರೈತರು, ಕೂಲಿ ಕಾರ್ಮಿಕರು, ಆಟೋ ಚಾಲಕರಾಗಿದ್ದು ಇವರಿಗೆ ಆರ್ಥಿಕ ಹೊರೆಯಾಗುತ್ತಿದೆ. ಶಿಕ್ಷಣ ಇಲಾಖೆ



ನಿಯಮಾನುಸಾರ ಯಾವುದೇ ಶಾಲೆಯು ದೇಣಿಗೆ ಪಡೆಯುವಂತಿಲ್ಲ ಅಲ್ಲದೆ ಇಲ್ಲಿನ ಖಾಸಗಿ ಶಾಲೆಗಳು ಪ್ರತಿವರ್ಷವೂ ಶಾಲಾ ಶುಲ್ಕವನ್ನು ಹೆಚ್ಚಳ ಮಾಡಿಕೊಳ್ಳುತ್ತಿವೆ. ದಾಖಲಾತಿಗಳನ್ನು ಕಂತಿನ ರೂಪದಲ್ಲಿ ಪೋಷಕರಿಂದ ಪಡೆಯುತ್ತಿದ್ದಾರೆ. ಈ ಬಗ್ಗೆ ನಾವು ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳು, ಉಪವಿಭಾಗಾಧಿಕಾರಿ ಗಳು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದ್ದೇವೆ. ಮನವಿ ಸಲ್ಲಿಸಿ ಹದಿನೈದು ದಿನಗಳಾದರೂ ಇಲ್ಲಿನ ಶಿಕ್ಷಣಾಧಿಕಾರಿಗಳು ನಮಗೆ ಸರಿಯಾದ ಮಾಹಿತಿ ನೀಡುವಲ್ಲಿ ವಿಫಲರಾಗಿದ್ದು, ಖಾಸಗಿ ಶಾಲೆಗಳ ಪೋಷಕರಿಗೆ ನ್ಯಾಯ ಸಿಗುವವರೆಗೂ ಹೋರಾಟ ನಡೆಯಲಿದೆ ಎಂದರು.

ಎಪಿಎಂಸಿ ಮಾಜಿ ನಿರ್ದೇಶಕ ಮಲ್ಲೇನಹಳ್ಳಿ ಕಾಂತರಾಜು ಮಾತನಾಡಿ, ಇಲ್ಲಿನ ಕೆಲ ಖಾಸಗಿ ಶಾಲೆಗಳು ಮಕ್ಕಳ ಪಠ್ಯಪುಸ್ತಕದಲ್ಲೂ ಹೆಚ್ಚಿನ ಹಣ ಪೀಕುತ್ತಿದ್ದಾರೆ. ಸರ್ಕಾರದ ನಿಯಮವನ್ನು ಉಲ್ಲಂಘಿಸಿ ಇಲ್ಲಿನ ಖಾಸಗಿ ಶಾಲೆಗಳು ಬೇಕಾಬಿಟ್ಟಿಯಾಗಿ ಶುಲ್ಕವನ್ನು ಹೆಚ್ಚಳ ಮಾಡು ತ್ತಿದ್ದಾರೆ. ಶುಲ್ಕದಲ್ಲೂ ತಾರತಮ್ಯ ನೀತಿ ಅನುಸರಿಸುತ್ತಿದ್ದು ಏಕರೂಪ ಶುಲ್ಕ ಇಲ್ಲ. ಶಿಕ್ಷಣ ವ್ಯವಸ್ಥೆಯೇ ಹಾಳಾಗುತ್ತಿದ್ದು ಕೂಡಲೆ ಸಂಬಂದಪಟ್ಟ ಅಧಿಕಾರಿಗಳು ಹೆಚ್ಚು ಶುಲ್ಕ ವಸೂಲಿ ಮಾಡುತ್ತಿರುವ ಖಾಸಗಿ ಶಾಲೆಗಳ ಮೇಲೆ ಕ್ರಮ ಕೈಗೊಳ್ಳ ಬೇಕೆಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಪೋಷಕರುಗಳಾದ ಮಧು ಬೆಳಗರಹಳ್ಳಿ, ನಾಗೇಶ್ ಬಿಳಿಗೆರೆಪಾಳ್ಯ, ಪ್ರಮೋದ್, ಸ್ವಾಮಿಗೌಡ, ಪ್ರವೀಣ್, ರೇಣುಕಾಮೂರ್ತಿ, ಪ್ರಸನ್ನ, ಭೈರೇಶ್, ದಯಾನಂದ್, ಕಾಂತರಾಜು, ಯೋಗೇಶ್, ಕಿರಣ್ ತಿಪಟೂರು, ಮಲ್ಲಿಕಾರ್ಜುನ್ ಸದೃಢ ಫೌಂಡೇಶನ್ ನಿರ್ದೇಶಕ ಲೋಕೇಶ್ ಮತ್ತಿತರರಿದ್ದರು.

# ವಾಯುಸೇನೆ ಯೋಧನ ಸೈಕಲ್ ಯಾತ್ರೆ

## ಯೋಧ ನರೇಂದ್ರಕುಮಾರ್‌ಗೆ ಗೌರವದ ಸ್ವಾಗತ



ತುಮಕೂರು: ಪೂನಾದಿಂದ ನಗರಕ್ಕೆ ಸೈಕಲ್ ಯಾತ್ರೆಯಲ್ಲಿ ಆಗಮಿಸಿದ ಭಾರತೀಯ ವಾಯು ಸೇನೆಯ ಯೋಧ ಜಿ.ಕೆ.ನರೇಂದ್ರ ಕುಮಾರ್ ಅವರನ್ನು ವಿವಿಧ ಮುಖಂಡರು ಶುಕ್ರವಾರ ನಗರದ ಶಿರಾ ಗೇಟ್‌ನಲ್ಲಿ ಸ್ವಾಗತಿಸಿ ಬರಮಾಡಿ ಕೊಂಡರು. ತುಮಕೂರಿನವರೇ ಆದ ನರೇಂದ್ರಕುಮಾರ್ ಭಾರತೀಯ ವಾಯು ಸೇನೆಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ದೇಶ ಭಕ್ತಿ ಸಂದೇಶ ಸಾರುವ ಸೈಕಲ್ ಯಾತ್ರೆಯಲ್ಲಿ ಪೂನಾದಿಂದ ನಗರಕ್ಕೆ ಆಗಮಿಸಿದರು. ಈ ವೇಳೆ ನಗರಪಾಲಿಕೆ ಮಾಜಿ ಸದಸ್ಯ ಲಕ್ಷ್ಮೀ ನರಸಿಂಹರಾಜು, ನರೇಂದ್ರ ಕುಮಾರ್ ತಂದೆ ನಿವೃತ್ತ ಉಪನ್ಯಾಸಕ ಡಾ.ಜಿ.ಎನ್.ಕೆಂಪಯ್ಯ, ಕುಟುಂಬದ ವರು ಹಾಗೂ ಮುಖಂಡರಾದ ಆರ್‌ಎಸ್‌ಎಸ್ ಉಮೇಶ್, ಪ್ರಸನ್ನಕುಮಾರ್, ಹರೀಶ್, ಶ್ರೀಕಾಂತ್ ಮೊದಲಾದವರು ಹಾಜರಿದ್ದು ಯೋಧನಿಗೆ ಹಾರಾರ್ಪಣೆ ಮಾಡಿ ಸಿಹಿ ಹಂಚಿ ಸಂಭ್ರಮಿಸಿದರು. ಸೈಕಲ್ ಪ್ರೇಮಿಯಾಗಿರುವ ಯೋಧ ನರೇಂದ್ರ ಕುಮಾರ್ ರಾಷ್ಟ್ರೀಯ ಎಂಟಿಬಿ ಗುಡ್ಡಗಾಡು ಸೈಕಲ್ ರೇಸ್‌ನಲ್ಲಿ ಭಾಗವಹಿಸಿ ಪ್ರಥಮ ಬಹುಮಾನ ಪಡೆದಿದ್ದಾರೆ. ಪೂನಾದಿಂದ ಸೈಕಲ್ ಏರಿ ಹೊರಟ ಇವರು ಐದೂವರೆ ದಿನಗಳ ಪ್ರಯಾಣದಲ್ಲಿ ತುಮಕೂರಿಗೆ ಆಗಮಿಸಿದರು.

## ಕೇರಾ ಸುರಕ್ಷಾ ವಿಮಾ ಯೋಜನೆ ಪ್ರಯೋಜನ ಪಡೆಯಲು ಮನವಿ

ತುಮಕೂರು: ತೆಂಗಿನ ಮರ ಹತ್ತುವ ಕೆಲಸದಲ್ಲಿ ತೊಡಗಿಕೊಂಡಿರುವವರು ಕೇರಾ ಸುರಕ್ಷಾ ವಿಮಾ ಯೋಜನೆಯ ಪ್ರಯೋಜನವನ್ನು ಪಡೆಯಬೇಕೆಂದು ತಿಪಟೂರು ತಾಲ್ಲೂಕು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಚಂದ್ರಶೇಖರ್ ಮನವಿ ಮಾಡಿದ್ದಾರೆ.

ಕೇರಾ ಸುರಕ್ಷಾ ವಿಮಾ ಯೋಜನೆಯು ವೈಯಕ್ತಿಕ ಅಪಘಾತ ವಿಮಾ ಯೋಜನೆಯಾಗಿದ್ದು, ವಾರ್ಷಿಕ ವಿಮಾ ಕಂತಿನ ಪ್ರೀಮಿಯಂ ಹಣ 956 ರೂ. ಹಾಗೂ ರೈತರ ವಂತಿಕೆ ಹಣ 239 ರೂ.ಗಳಿಗೆ ನಿಗಧಿಪಡಿಸಲಾಗಿದೆ. ಇದರಲ್ಲಿ 7ಲಕ್ಷ ರೂ.ವರೆಗಿನ ವಿಮೆ ಮತ್ತು 2 ಲಕ್ಷ ರೂ.ಗಳವರೆಗೆ ಆಸ್ಪತ್ರೆ ಚಿಕಿತ್ಸೆ ವೆಚ್ಚ ಒಳಗೊಂಡಿರುತ್ತದೆ.

ಕೇರಾ ಸುರಕ್ಷಾ ವಿಮಾ ಯೋಜನೆಗೆ 18 ರಿಂದ 65 ವರ್ಷದೊಳಗಿನ ತೆಂಗಿನ ಮರ ಹತ್ತುವವರು/ತೆಂಗಿನಕಾಯಿ ಕೀಳುವವರು/ನೀರಾ ತಂತ್ರಜ್ಞರು ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಸಂಬಂಧಿಸಿದ ಹೋಬಳಿ ಸಹಾಯಕ ತೋಟಗಾರಿಕೆ ಅಧಿಕಾರಿ ಅಥವಾ ತಿಪಟೂರು ತೋಟಗಾರಿಕೆ ಇಲಾಖೆಯನ್ನು ಸಂಪರ್ಕಿಸಬೇಕೆಂದು ಅವರು ತಿಳಿಸಿದ್ದಾರೆ.

# ಸಾರ್ವಜನಿಕರಿಗೆ ತೊಂದರೆ ಕೊಡಬೇಡಿ: ಶಾಸಕ ಜ್ಯೋತಿಗಣೇಶ್

(1ನೇ ಪುಟದಿಂದ) ಈಗಾಗಲೇ ಇ–ಆಸ್ತಿ ಮಾಡಿಸಲು ಸಾಧ್ಯವಾಗದೇ ಸಾರ್ವಜನಿಕರು ಅಧಿಕಾರಿಗಳಿಗೆ ಹಿಡಿ ಶಾಪ ಹಾಕುತ್ತಿದ್ದಾರೆ. ಇನ್ನಾದರೂ ಅಧಿಕಾರಿಗಳು ವರ್ತನೆಯಲ್ಲಿ ಬದಲಾವಣೆ ಮಾಡಿಕೊಳ್ಳಬೇಕು. ಮುಂದಿನ ದಿನಗಳಲ್ಲಿ ವರ್ತನೆಯಲ್ಲಿ ಬದಲಾವಣೆ ಮಾಡಿಕೊಂಡು ಸಾರ್ವಜನಿಕರಿಗೆ ನೆರವಾಗಬೇಕೆಂದು ಸೂಚನೆ ನೀಡಿದರು. ಪರವಾನಗಿ ಪಡೆದು ಕಟ್ಟಡ ನಿರ್ಮಾಣ ನಂತರ ಕಟ್ಟಡವೆಂದು ನಮೂದು ಮಾಡಿಸಲು ತಿಂಗಳುಗಟ್ಟಲೆ ಅಲೆದಾಡಿಸಬೇಡಿ ಎಂದರು. ಸಾರ್ವಜನಿಕರಿಗೆ ಅಧಿಕಾರಿಗಳು ಕಛೇರಿ ಸಮಯದಲ್ಲಿ ಸುಲಭವಾಗಿ ಸಿಗುವಂತಾಗಬೇಕು. ಯಾವುದೇ ಬೇರೆ ಸಬೂಬುಗಳನ್ನು ಹೇಳದೇ ಜನಸ್ನೇಹಿಯಾಗಬೇಕೆಂದು ಶಾಸಕರು ತಿಳಿಸಿದರು. ಈ ಸಭೆಯಲ್ಲಿ ತುಮಕೂರು ಮಹಾನಗರಪಾಲಿಕೆಯ ಕಂದಾಯ ಆಯುಕ್ತರು, ವಲಯ ಆಯುಕ್ತರು, ಕಂದಾಯ ಶಾಖೆಯ ಅಧಿಕಾರಿಗಳು ಹಾಜರಿದ್ದರು.

# ಇಂದು ಸಚಿವರಿಂದ ವಿವಿಧ ಕಟ್ಟಡಗಳ ಉದ್ಘಾಟನೆ/ ಅಭಿನಂದನ ಪತ್ರ ವಿತರಣೆ

ತುಮಕೂರು: ಮಹಾನಗರಪಾಲಿಕೆ ಆವರಣದಲ್ಲಿ ನಿರ್ಮಿಸಿರುವ ನೂತನ ಸಭಾಂಗಣ, ಅಭಿಲೇಖಾಲಯ, ಅಕ್ಕ ಕೆಫೆ, ಶಿಶು ಪಾಲನ ಕೇಂದ್ರ; ಜಿಲ್ಲಾ ಆಸ್ಪತ್ರೆ ಮತ್ತು ಎಪಿಎಂಸಿ ಮಾರುಕಟ್ಟೆ ಆವರಣದಲ್ಲಿ ನಿರ್ಮಿಸಿರುವ ಇಂದಿರಾ ಕ್ಯಾಂಟಿನ್ ಉದ್ಘಾಟನೆ, ಎ ಹಾಗೂ ಬಿ–ಖಾತಾ ಫಲಾನುಭವಿಗಳಿಗೆ ನಮೂನೆ–2/2ಎ ವಿತರಣಾ ಮತ್ತು ಪ್ರಾಮಾಣಿಕ ತೆರಿಗೆ ಪಾವತಿದಾರರಿಗೆ ಅಭಿನಂದನಾ ಪತ್ರ ವಿತರಣಾ ಕಾರ್ಯಕ್ರಮವನ್ನು ಗೃಹ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ: ಜಿ. ಪರಮೇಶ್ವರ ಅವರು ಮೇ 17ರಂದು ಸಂಜೆ 4 ಗಂಟೆಗೆ ನೆರವೇರಿಸಲಿದ್ದಾರೆ.

ನಗರ ಶಾಸಕ ಜಿ.ಬಿ.ಜ್ಯೋತಿಗಣೇಶ್ ಕಾರ್ಯಕ್ರಮದ ಅಧ್ಯಕ್ಷತೆವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ವಿವಿಧ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಭಾಗವಹಿಸುವರು.

# ಭಯೋತ್ಪಾದನೆ ನಿಗ್ರಹ ನಮ್ಮ ಗುರಿ: ಸಂಸದ ಗೋವಿಂದ ಕಾರಜೋಳ



ಪಾವಗಡ: ಪಾಪಿಗಳು ಧರ್ಮದ ಹೆಸರಿನಲ್ಲಿ ನಮ್ಮವರನ್ನು ಕೊಂದರು. ನಮ್ಮ ಹೆಮ್ಮೆಯ ನಮ್ಮ ಹೆಮ್ಮೆಯ ಸೈನ್ಯ ಪಾಪಿಗಳ ದೇಶಕ್ಕೆ ನುಗ್ಗಿ 9 ಉಗ್ರರ ಮನೆಗಳ ಧ್ವಂಸ ಹಾಗೂ 140ಕ್ಕೂ ಹೆಚ್ಚು ಭಯೋತ್ಪಾದಕರನ್ನು ಬಲಿಪಡೆದು 11 ಉಗ್ರರ ನೆಲೆಗಳನ್ನು ನೆಲಸಮ ಮಾಡಿದೆ ಎಂದು ಚಿತ್ರದುರ್ಗ ಲೋಕಸಭಾ ಸದಸ್ಯ ಗೋವಿಂದ ಎಂ ಕಾರಜೋಳ ತಿಳಿಸಿದರು.

ಅವರು ಗುರುವಾರ ತಾಲೂಕಿನ ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿಯಾಗಿ ಪಟ್ಟಣದ ಶ್ರೀ ಗಿರಿ ಆಂಧ್ರ ಭವನದಲ್ಲಿ ಬಿಜೆಪಿ ಪಕ್ಷದ ಕಾರ್ಯಕರ್ತರ ಸಭೆ ಉದ್ದೇಶಿಸಿ ಮಾತನಾಡಿದರು.

ಭಯೋತ್ಪಾದನೆ ಸಂಪೂರ್ಣ ನಾಶಗೊಳಿಸುವುದೆ ನಮ ಗುರಿ, ಪಾಕ್ ಜೊತೆ ಯಾವುದೇ ಮಾತು ಕಥೆ ಇಲ. ಪಾಪಿ ಆಕ್ರಮಿತ ಪಿಒಕೆ ವಶಕ್ಕೆ ಪಡೆಯುವ ತನಕ ಆಪರೇಷನ್ ಸಿಂಧೂರ ನಿಲ್ಲದು ಎಂದ ಅವರು, ಪಾಕಿಸ್ತಾನಕ್ಕೆ ನುಗ್ಗಿ ಹೊಡೆಯುವ ಶಕ್ತಿ ಯಾವುದೇ ದೇಶಕ್ಕಿಲ್ಲ. ಆದರೆ ನಮ್ಮ ಪ್ರಧಾನ ಮಂತ್ರಿಗಳು ಸೈನ್ಯಕ್ಕೆ ಪೂರ್ಣ ಅಧಿಕಾರ ನೀಡಿರುವ ಹಿನ್ನೆಲೆ ಪಾಪಿಗಳ ದೇಶಕ್ಕೆ ನುಗ್ಗಿ ಅವರನ್ನು ಹೆಡೆಮುರಿ ಕಟ್ಟುವ ಕೆಲಸ ಮಾಡಿದ್ದೇವೆ ಎಂದರು.

ಬಿಜೆಪಿ ತಾಲೂಕು ಅಧ್ಯಕ್ಷ ದೊಡ್ಡಹಳ್ಳಿ ಅಶೋಕ್ ಮಾತನಾಡಿ, ನಾನು ತಾ.ಅಧ್ಯಕ್ಷನಾದ ನಂತರ ಹಲವು ಸಮಸ್ಯೆಗಳ ಬಗ್ಗೆ ಹೋರಾಟ ಪ್ರತಿಭಟನೆಗಳು ಮಾಡಿದ್ದು, ಇಲ್ಲಿನ ಅಧಿಕಾರಿಗಳು ಪಕ್ಷಭೇದ ಮಾಡುವುದನ್ನು ನಿಲ್ಲಿಸಬೇಕು. ಇಲ್ಲವಾದಲ್ಲಿ ಮುಂದೊಂದು ದಿನ ಕಷ್ಟದ ದಿನಗಳ ಎದುರಿಸಬೇಕಾಗುತ್ತದೆ ಎಂದರು.

ಮಧುಗಿರಿ ಬಿಜೆಪಿ ಜಿಲ್ಲೆಯ ಅಧ್ಯಕ್ಷ ಹನುಮಂತೆಗೌಡ, ಕೊರಟಗೆರೆ ನಿವೃತ್ತ ಐಎಎಸ್ ಅಧಿಕಾರಿ ಅನಿಲ್ ಕುಮಾರ್, ಡಾ.ಜಿ.ವೆಂಕಟರಾಮಯ್ಯ, ರವಿ ಮಾತನಾಡಿದರು. ಟೋಲ್‌ಗೇಟ್ ಬಳಿಯ ಅಂಬೇಡ್ಕರ್ ವೃತ್ತದಿಂದ ಶನಿಮಹಾತ್ಮ ದೇವಸ್ಥಾನದವರೆಗೂ ನಡೆದ ತಿರಂಗಾ ಯಾತ್ರೆಯಲ್ಲಿ ಸಂಸದ ಗೋವಿಂದ ಎಂ ಕಾರಜೋಳ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

# ಸಿದ್ಧಗಂಗೆಯಲ್ಲಿ ಸಂಸ್ಕೃತ ಸಂಸ್ಕಾರ ಶಿಬಿರ ಉದ್ಘಾಟನೆ

ತುಮಕೂರು: ಶ್ರೀ ಸಿದ್ದಗಂಗಾ ಮಠದ ಶ್ರೀಸಿದ್ದಲಿಂಗೇಶ್ವರ ವೇದ ಸಂಸ್ಕೃತ ಮಹಾವಿದ್ಯಾಲಯದ ವತಿಯಿಂದ ಆಯೋಜಿಸಿರುವ ಸಂಸ್ಕೃತ ಸಂಸ್ಕಾರ ಶಿಬಿರದ ಉದ್ಘಾಟನಾ ಸಮಾರಂಭವನ್ನು ಶ್ರೀ ಸಿದ್ದಗಂಗಾ ಮಠದ ಕಾಲೇಜಿನ ಸಭಾಂಗಣದಲ್ಲಿ ನೆರವೇರಿಸಲಾಯಿತು.

ಉದ್ಘಾಟನೆ ನೆರವೇರಿಸಿಕೊಟ್ಟ ಸಂಸ್ಥೆಯ ಕಾರ್ಯದರ್ಶಿಗಳಾದ ಟಿ.ಕೆ.ನಂಜುಂಡಪ್ಪನವರು ಆಧುನಿಕ ಕಾಲದಲ್ಲಿ ಸಂಸ್ಕೃತದ ಮಹತ್ವದ ಬಗ್ಗೆ ಹಾಗೂ ಸಂಸ್ಕೃತ ಮತ್ತು ಸಂಸ್ಕಾರದ ಬೆಳವಣಿಗೆಯಲ್ಲಿ ಶಿಬಿರಗಳ ಪಾತ್ರ ಮಹತ್ವವನ್ನು ಪಡೆದಿರುತ್ತದೆ ಎಂದು ಆಶಯ ವ್ಯಕ್ತಪಡಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಸಂಸ್ಕೃತ ಭಾರತೀಯ ಕರ್ನಾಟಕ ದಕ್ಷಿಣ ಪ್ರಾಂತದ ಉಪಾಧ್ಯಕ್ಷರಾದ ವಿ. ಹನುಮಂತರಾಯಪ್ಪರವರು ಶಿಬಿರಗಳು ನಮ

ಭಾರತೀಯ ಸಂಸ್ಕಾರವನ್ನು ಹಾಗೂ ಭಾರತೀಯ ಮಾತೃ ಭಾಷೆಯಾದ ಸಂಸ್ಕೃತವನ್ನು ಉಳಿಸಿಬೆಳೆಸುವಲ್ಲಿ ವಿಶೇಷ ಕಾಳಜಿಯನ್ನು ವಹಿಸುತ್ತಿವೆ. ಅಂತಹ ಕಾರ್ಯವನ್ನು ಶ್ರೀ ಸಿದ್ದಗಂಗಾ ಮಠ ಹಾಗೂ ಶ್ರೀ ಸಿದ್ಧಲಿಂಗೇಶ್ವರ ವೇದ ಸಂಸ್ಕೃತ ಮಹಾವಿದ್ಯಾಲಯ ನಡೆಸುತ್ತಿರುವುದು ಅತ್ಯಂತ ಹರ್ಷ ತಂದಿದೆ ಎಂದು ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಕಾಲೇಜಿನ ವಿಷಯ ಪರಿವೀಕ್ಷಕರಾದ ವಿ. ಬಿ.ಆರ್. ಗಂಗಾಧರನ್ ರವರುಹಾಗೂ ಕಾಲೇಜಿನ ಪ್ರಾಂಶುಪಾಲರಾದ ಡಾ. ಎಸ್.ಎಸ್.ನಿರಂಜನಮೂರ್ತಿಉಪಸ್ಥಿತರಿದ್ದರು.

ಕಾರ್ಯಕ್ರಮದ ನಿರೂಪಣೆಯನ್ನು ಡಾ.ಎಸ್. ಪ್ರಶಾಂತ್‌ಭಟ್‌ರವರು ಮಾಡಿದರು. ಸ್ವಾಗತವನ್ನು ವಿ.ಕೆ. ಎನ್. ವೀರಭದ್ರಯ್ಯನವರು ನೆರವೇರಿಸಿದರು. ವಂದನಾರ್ಪಣೆ ಯನ್ನು ವಿ.ನವೀನ ಕುಮಾರ್ ಮಾಡಿದರು. ಉಪನ್ಯಾಸಕರು, ಸಿಬ್ಬಂದಿ ಹಾಜರಿದ್ದರು.

**ಕಾಡು ಬೆಳೆಸಿ ನಾಡು ಉಳಿಸಿ**

**Printed by:** H.S.PARAMESH, SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101 **Published by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **owned by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **Printed at** SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101 **and published at** TUMAKURU. BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132
**Editor:** RADHIKA A.R. "**KARNATAKA SUCCESS NO 1**" KANNADA Daily News Paper